19

ಶಾಖೆ / ವಿಷಯ : DEPARTMENT / SUBJECT: ಲೋಕಾಯುಕ್ತ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE 30/3/2021

# ಲೋಕಾ ವರದಿ ಹಾಜರು ಪಡಿಸಿ

**ಬೆಂಗಳೂರು:** ರಾಜ್ಯದಲ್ಲಿ ವಕ್ಫ್ ಆಸ್ತಿಗಳ ಒತ್ತುವರಿ ಹಾಗೂ ದುರ್ಬಳಕೆಗೆ ಸಂಬಂಧಿಸಿದಂತೆ 2016ರಲ್ಲಿ ಲೋಕಾಯುಕ್ತ ಸಂಸ್ಥೆ ಸಲ್ಲಿಸಿರುವ ವರದಿಯನ್ನು ನ್ಯಾಯಾಲಯದ ಮುಂದೆ ಹಾಜರುಪಡಿಸುವಂತೆ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶನ ನೀಡಿದೆ.

ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ವಕ್ಫ್ ಆಸ್ತಿ ದುರ್ಬಳಕೆಗೆ ಸಂಬಂಧಿಸಿದಂತೆ, 2012ರಲ್ಲಿ ಸಲ್ಲಿಸಿರುವ ವಿಶೇಷ ವರದಿ ಆಧರಿಸಿ ಬೀದರ್ ಸೇರಿ ರಾಜ್ಯದ ಎಲ್ಲ ಜಿಲ್ಲೆಗಳಲ್ಲಿನ ವಕ್ಫ್ ಆಸ್ತಿಗಳ ಒತ್ತುವರಿ ಹಾಗೂ ದುರ್ಬಳಕೆಯನ್ನು ಸಿಬಿಐ ತನಿಖೆಗೆ ವಹಿಸುವಂತೆ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡುವಂತೆ ಕೋರಿ ಮಾಜಿ ಸಚಿವ ಎಸ್.ಕೆ. ಕಾಂತಾ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಯನ್ನು ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ್ ಅವರ ನೇತೃತ್ವದ ವಿಭಾಗೀಯ ನ್ಯಾಯಪೀಠ ಸೋಮವಾರ ವಿಚಾರಣೆ ನಡೆಸಿತು. ಅರ್ಜಿದಾರರ ಪರ ವಕೀಲ ಶ್ರೀಧರ ಪ್ರಭು ವಾದ ಮಂಡಿಸಿ, ಲೋಕಾಯುಕ್ತ ಸಂಸ್ಥೆ 2016ರಲ್ಲಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ. ಆದರೆ, ಆ ವರದಿ ಈವರೆಗೆ ಸದನದ ಮುಂದೆ ಮಂಡಿಸಲಾಗಿಲ್ಲ ಎಂದರು. ಆದಕ್ಕೆ, ಲೋಕಾಯುಕ್ತ ಸಂಸ್ಥೆಯ ವರದಿಯನ್ನು ಮುಂದಿನ ವಿಚಾರಣೆ ವೇಳೆ ನ್ಯಾಯಾಲಯಕ್ಕೆ ಹಾಜರುಪಡಿಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಿತು.